ಆ) ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದ ಇತಿಮಿತಿ ಮತ್ತು ಆದ್ಯತೆ ಮೇರೆಗೆ ಸ್ಥಾಪಿಸಬೇಕಾದ ನ್ಯಾಯಾಲಯಗಳನ್ನು ಗಣನೆಗೆ ತೆಗೆದುಕೊಂಡು ಕುಂದಾಪುರದಲ್ಲಿ ಒಂದು ಸಿವಿಲ್ ಜಡ್ಜ್ ನ್ಯಾಯಾಲಯ (ಹಿರಿಯ ವಿಭಾಗ)ವನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು.

ಬಾಲ ಕಾರ್ಮಿಕರ ಏಳಿಗೆ

2356 -ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಇದುವರೆವಿಗೂ ಗುರುತಿಸಲಾದ ಬಾಲ ಕಾರ್ಮಿಕರ ಸಂಖ್ಯೆ ಎಷ್ಟು?

ಆ) ಪತ್ತೆ ಹಚ್ಚಲಾದ ಬಾಲ ಕಾರ್ಮಿಕರ ಬಗ್ಗೆ ಸರ್ಕಾರವು ತೆಗೆದುಕೊಂಡ ಬದಲೀ ಕ್ರಮಗಳೇನು? (ವಿವರ ನೀಡುವುದು)

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :

ಅ) 97,520

ಆ) ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ನೀಡಿರುವ ನಿರ್ದೇಶನಗಳನ್ನು ಕಾರ್ಯಗತಗೊಳಿಸಲು ಈ ಕೆಳಗೆ ವಿವರಿಸಿರುವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

1) ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಮನ್ವಯ ಸಮಿತಿಯನ್ನು ರಚಿಸಲಾಗಿದೆ.

2) ಸರ್ಕಾರದ ಹಂತದಲ್ಲಿ "ಬಾಲ ಕಾರ್ಮಿಕ ಕೋಶ"ವನ್ನು ಸೃಷ್ಟಿಸಲಾಗಿದೆ.

3) ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯಾ ಜಿಲ್ಲೆಗಳಲ್ಲಿ ಬಾಲ ಕಾರ್ಮಿಕ ಕಲ್ಯಾಣ ಸಮಿತಿಯನ್ನು ರಚಿಸಲಾಗಿದೆ. ಈ ಕಲ್ಯಾಣ ಸಮಿತಿಗೆ ಬಾಲ ಕಾರ್ಮಿಕ ಕಲ್ಯಾಣ ನಿಧಿ ಹಾಗೂ ಪುನರ್ವಸತಿಯ ಬಗ್ಗೆ ಕ್ರಮಗಳನ್ನು ಜರುಗಿಸಲು ಅಧಿಕಾರ ನೀಡಲಾಗಿದೆ.

4) ಬಾಲ ಕಾರ್ಮಿಕ ಕಲ್ಯಾಣ ನಿಧಿಯನ್ನು ಸೃಷ್ಟಿಸಲಾಗುತ್ತಿದೆ.

5) ಕಾರ್ಮಿಕ ಇಲಾಖೆ, ಕಾರ್ಖಾನೆಗಳ ಮತ್ತು ಬಾಯ್ಲರುಗಳ ಇಲಾಖೆ, ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳನ್ನು ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕಲಂ 17ರ ಅಡಿಯಲ್ಲಿ ಪರಿವೀಕ್ಷಕರನ್ನಾಗಿ ನೇಮಿಸಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳನ್ನು ಪರಿವೀಕ್ಷಕರನ್ನಾಗಿ ನೇಮಿಸುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.